ಕರ್ನಾಟಕ ವಿಧಾನ ಪರಿಷತ್ತು

1 ಚುಕ್ಕೆ ಗುರುತಿಲ್ಲದಪ್ರಶ್ನೆ ಸಂಖ್ಯೆ : 1343 (1191)
2 ಸದಸ್ಯರ ಹೆಸರು : ಶ್ರೀ ಕೆ.ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)
3 ಉತ್ತರಿಸಬೇಕಾದ ದಿನಾಂಕ : 23.09.2021
4 ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯಮಂತ್ರಿಗಳು.

ಕ್ರ.ಸಂ	ಪ್ರಶ್ನೆ	ಉತ್ತರ
ಅ	ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಉನ್ನತ ವ್ಯಾಸಂಗಕ್ಕೆ (ಪಿ.ಹೆಚ್.ಡಿ ಮತ್ತು ಎಂ.ಫಿಲ್ ಸೇರಿದಂತೆ) ಅರಿವು ಸಾಲ ಯೋಜನೆಯಡಿಯಲ್ಲಿ ಶೈಕ್ಷಣಿಕ ಸಾಲ ನೀಡುತ್ತಿದ್ದು, ಕಳೆದ 2019-20, 2020-21ನೇ ಸಾಲಿನಲ್ಲಿ ಸದರಿ ಯೋಜನೆಯನ್ನು ತಡೆಹಿಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಹೌದು.
ಆ	ಬಂದಿದ್ದಲ್ಲಿ ಆರ್ಥಿಕ ಸಂಕಷ್ಟದಲ್ಲಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ಪೋಷಕರಿಗೆ ತಮ್ಮ ಮಕ್ಕಳ ಉನ್ನತ ವ್ಯಾಸಾಂಗಕ್ಕೆ ಅರಿವು ಸಾಲ ಯೋಜನೆಯು ಸಹಕಾರಿಯಾಗುತ್ತಿದ್ದು, ಇದನ್ನು ತಡೆಹಿಡಿದಿರುವುದರಿಂದ ತುಂಬಾ ತೊಂದರೆಯಾಗಿದ್ದು, ಸದರಿ ಯೋಜನೆಯನ್ನು ಪುನರಾರಂಭಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ಒದಗಿಸುವುದು).	2021-22 ನೇ ಸಾಲಿಗೆ ಅರಿವು ಸಾಲಕ್ಕಾಗಿಯೇ ಸುಮಾರು ರೂ.80.27 ಕೋಟಿಗಳ ಅವಶ್ಯಕತೆ ಇರುತ್ತದೆ. ಇದರಲ್ಲಿ 2021-22 ನೇ ಸಾಲಿಗೆ ನಿಗಮಕ್ಕೆ ರೂ.55.00ಕೋಟಿ ಆಯವ್ಯಯ ನಿಗಧಿಯಾಗಿದ್ದು, ಅದರಲ್ಲಿ ಅರಿವು ಯೋಜನೆಗೆ ರೂ.17.50 ಕೋಟಿಗಳು ಹಂಚಿಕೆಯಾಗಿದೆ ಆದ್ದರಿಂದ ಕೆ.ಎಂ.ಡಿ.ಸಿ. ಯ ಅರಿವು ಸಾಲದ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಆದ್ಯತೆ ಮೇರೆಗೆ ಪ್ರಾಥಮಿಕ ಹಂತದಲ್ಲಿ KEA ಯಿಂದ ಮೆರಿಟ್ ಆಧಾರದ ಮೇಲೆ ಆಯ್ಕೆಯಾಗುವ ನೂತನ ವಿದ್ಯಾರ್ಥಿಗಳಿಗೆ ಹಾಗೂ ನವೀಕರಣದ ವಿದ್ಯಾರ್ಥಿಗಳಿಗೆ (Fresh & renewal) ಸಾಲ ಸೌಲಭ್ಯ ವಿಸ್ತರಿಸಲಾಗುವುದು. Non-KEA Management ಕೋಟಾದಡಿ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಹಾಗೂ ಇತರೆ ಸಾಮಾನ್ಯ ಕೋರ್ಸ್‌ಗಳ ವಿದ್ಯಾರ್ಥಿಗಳಿಗೆ ಎರಡನೇ ಹಂತದಲ್ಲಿ ಹೆಚ್ಚುವರಿ ಅನುದಾನದ ಲಭ್ಯತೆಯ ಆಧಾರದಲ್ಲಿ ಸಾಲ ಸೌಲಭ್ಯ ಯೋಜನೆಯನ್ನು ವಿಸ್ತರಿಸಲು ಕ್ರಮವಹಿಸಲಾಗುವುದು.

ಸಂಖ್ಯೆ:MWD 254 LMQ 2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ